ಮುಂದುವರಿದ ಮತ್ತು ಹೊಸ ಕಾರ್ಯಕ್ರಮಗಳನ್ನು ಆಧರಿಸಿ ಅನುದಾನವನ್ನು ಹಂಚಿಕೆ ಮಾಡಲಾಗುವುದು.

ಊ) ಪ್ರಸಕ್ತ ಸಾಲಿನಲ್ಲಿ ಐ.ಎ.ಎಸ್., ಕೆ.ಎ.ಎಸ್., ಬ್ಯಾಂಕಿಂಗ್ ಇತ್ಯಾದಿ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರ್ವಭಾವಿ ತರಬೇತಿಗಾಗಿ ಸಮಾಜ ಕಲ್ಯಾಣ ಇಲಾಖೆಯು ಸುಮಾರು 500 ಅಭ್ಯರ್ಥಿಗಳನ್ನು ನಿಯೋಜಿಸಲು ನಿರ್ಧರಿಸಲಾಗಿದೆ. ಇದಕ್ಕಾಗಿ ಅಂದಾಜು ₹ 500.00 ಲಕ್ಷಗಳನ್ನು ಮೀಸಲಿಡಲಾಗಿದೆ ಹಾಗೆಯೇ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2,000 ಅಭ್ಯರ್ಥಿಗಳನ್ನು ನಿಯೋಜಿಸಲು ನಿರ್ಧರಿಸಿದ್ದು, ಇದಕ್ಕಾಗಿ ಅಂದಾಜು ₹ 295.00 ಲಕ್ಷಗಳನ್ನು ಮೀಸಲಿಡಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಇಂಪ್ಲಿಮೆಂಟೇಶನ್ ಕಾಯ್ದೆ ಜಾರಿಗೆ ತರುವುದು

2780 (3927), ಡಾ॥ ಸುಧಾಕರ್ ಕೆ. (ಚಿಕ್ಕಬಳ್ಳಾಪುರ)

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಇಂಪ್ಲಿಮೆಂಟ್ ಕಾಯ್ದೆ ಜಾರಿಗೆ ತರುವ ಕಾರ್ಯ ಯಾವ ಹಂತದಲ್ಲಿದೆ; ಈ ಕುರಿತು ಈಗಾಗಲೇ ಸಾಕಷ್ಟು ಸಭೆಗಳು ನಡೆದಿರುವುದು ನಿಜವೆ;

ಆ) ಕಾಯ್ದೆ ಜಾರಿಗೆ ಬಂದರೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಸಿಗುವ ಅನುಕೂಲಗಳು ಯಾವುವು; ಈ ಕಾಯ್ದೆ ಹೊಸದಾಗಿ ಜಾರಿಗೆ ತರಲು ಸರ್ಕಾರ ಕ್ರಮ ಕೈಗೊಳ್ಳುವುದೆ (ಇರುವ ಕಾಯ್ದೆಗೆ ಬಲ ತುಂಬಲಾಗುತ್ತಿದೆಯೇ ವಿವರಿಸಿ);

ಇ) ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ. ಫಲಿತಾಂಶದ ಪ್ರಗತಿ ಕಂಡಿರುವುದು ನಿಜವೇ

(ಕಳೆದ ಮೂರು ವರ್ಷದ ಫಲಿತಾಂಶದ ಸರಾಸರಿ ವಿವರ ನೀಡುವುದು);

ಈ) ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಫಲಿತಾಂಶವನ್ನು ಇನ್ನಷ್ಟು ಹೆಚ್ಚಳ ಮಾಡಲು ಸರ್ಕಾರ ಉದ್ದೇಶಿಸಿದೆಯೇ ಹಾಗಿದ್ದರೆ, ಉದ್ದೇಶಿಸಿರುವ ಕ್ರಮಗಳು ಏನು (ವಿವರ ಒದಗಿಸುವುದು)?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಕರ್ನಾಟಕ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ (ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ) ಅಧಿನಿಯಮ, 2013, ದಿನಾಂಕ:20.03.2014 ರಿಂದ ಜಾರಿಗೆ ಬಂದಿರುತ್ತದೆ. ಪ್ರಸಕ್ತ ಸಾಲಿನಲ್ಲಿ ನೋಡಲ್ ಏಜೆನ್ಸಿ ಸಭೆಯನ್ನು ದಿನಾಂಕ 07.02.2014 ಮತ್ತು 29.05.2014 ರಂದು ನಡೆಸಿ, ವಿವಿಧ ಅಭಿವೃದ್ಧಿ ಇಲಾಖೆಗಳಿಗೆ ಹಂಚಿಕೆ ಮತ್ತು ಕ್ರಿಯಾ ಯೋಜನೆಗಳನ್ನು ಪರಿಶೀಲಿಸಿ, ಅನುಮೋದನೆ ನೀಡಲು ರಾಜ್ಯ ಅಭಿವೃದ್ಧಿ ಪರಿಷತ್ತಿಗೆ ಶಿಫಾರಸ್ಸು ಮಾಡುವ ಕ್ರಮ ಕೈಗೊಳ್ಳಲಾಗಿದೆ.

ಆ) 1) ಕಾಯ್ದೆಯನ್ನು ಜಾರಿಗೆ ತಂದಿರುವುದರಿಂದ' 2014–15ನೇ ಸಾಲಿನಲ್ಲಿ 2011ನೇ ಜನಗಣತಿ ಪ್ರಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಯ ಶೇಕಡಕ್ಕನುಗುಣವಾಗಿ ಒಟ್ಟು ₹ 15834.16 ಕೋಟಿಗಳನ್ನು (SCSP – ₹ 11518.98 ಕೋಟಿ ಮತ್ತು TSP – ₹ 4315.18 ಕೋಟಿಗಳು) ಆಯವ್ಯಯದಲ್ಲಿ ಒದಗಿಸಲಾಗಿದೆ.

2) ಪ್ರಸಕ್ತ ಸಾಲಿನಲ್ಲಿ ವಿವಿಧ ಅಭಿವೃದ್ಧಿ ಇಲಾಖೆಗಳಿಗೆ ಈ ಎರಡು ಉಪ ಯೋಜನೆಗಳಡಿ ಒದಗಿಸಿದ ಅನುದಾನವನ್ನು ಪೂರ್ಣವಾಗಿ ಬಳಸಿಕೊಂಡು, ಅನುಮೋದಿತ ಕಾರ್ಯಕ್ರಮಗಳನ್ನು

ಪಾರದರ್ಶಕವಾಗಿ ಅನುಷ್ಠಾನ ಮಾಡಿ, ಈ ಜನಾಂಗದವರನ್ನು ಅಭಿವೃದ್ಧಿ ಪಡಿಸುವ ಜವಾಬ್ದಾರಿಯನ್ನು ಆಯಾ ಅಭಿವೃದ್ಧಿ ಇಲಾಖೆಗಳಿಗೆ ವಹಿಸಲಾಗಿದೆ.

3) ಸದರಿ ಉಪ ಯೋಜನೆಗಳ ಅನುಷ್ಠಾನದಲ್ಲಿ ಉತ್ತಮ ರೀತಿಯಲ್ಲಿ ಕಾರ್ಯ ಸಾಧನೆ ಮಾಡುವ ಅಧಿಕಾರಿಗಳು/ಸಿಬ್ಬಂದಿಗಳಿಗೆ ಪ್ರೋತ್ಸಾಹಧನ ನೀಡಲು ಅವಕಾಶವಿದೆ ಹಾಗೂ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಉದ್ದೇಶ ಪೂರ್ವಕವಾಗಿ ನಿರ್ಲಕ್ಷಿಸಿದರೆ ಅಂತಹವರಿಗೆ ಸರ್ಕಾರದ ಸೇವಾ/ಶಿಸ್ತು ಪಾಲನಾ ನಿಯಮಗಳ ಮೇರೆಗೆ ಶಿಸ್ತು ಕ್ರಮ ಜರುಗಿಸಲಾಗುವುದು ಅಥವಾ 6 ತಿಂಗಳುಗಳವರೆಗೆ ಕಾರಾವಾಸದಿಂದ ದಂಡನೆ ನೀಡಲು ಅವಕಾಶವಿರುತ್ತದೆ.

4) ಈ ಉಪ ಯೋಜನೆಗಳಡಿಯಲ್ಲಿ ಆರ್ಥಿಕ ವರ್ಷದ ಅಂತ್ಯದಲ್ಲಿ ಬಳಕೆ ಮಾಡದೆ ಉಳಿಕೆಯಾಗುವ ಅನುದಾನವನ್ನು ವ್ಯಪಗತವಾಗದೆ ಮುಂದಿನ ಆರ್ಥಿಕ ವರ್ಷದಲ್ಲಿ ಖರ್ಚು ಮಾಡಲು ಅವಕಾಶ ಕಲ್ಪಿಸಲಾಗಿದೆ.

5) ಈ ಎರಡು ಉಪ ಯೋಜನೆಗಳಡಿ ಅನುಷ್ಠಾನ ಮಾಡುತ್ತಿರುವ ಕಾರ್ಯಕ್ರಮಗಳ ಪ್ರಗತಿ ಹಾಗೂ ಅನುಷ್ಠಾನ ಮಾಡುವಲ್ಲಿ ಉಂಟಾಗುವ ಸಮಸ್ಯೆಗಳನ್ನು ಬಗೆಹರಿಸುವ ಬಗ್ಗೆ ಹಾಗೂ ಎಲ್ಲಾ ಕಾರ್ಯನೀತಿ ವಿಷಯಗಳ ಬಗ್ಗೆ ರಾಜ್ಯ ಅಭಿವೃದ್ಧಿ ಪರಿಷತ್ ವರ್ಷಕ್ಕೆ ಎರಡು ಬಾರಿ ಸಭೆ ಸೇರಿ, ಚರ್ಚಿಸಿ, ಸಲಹೆ ನೀಡಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಅನುಕೂಲವಾಗುತ್ತದೆ.

6) ಹಾಲಿ ಜಾರಿಯಲ್ಲಿರುವ ಕಾಯ್ದೆಯನ್ನು ಬಲಪಡಿಸಲು ನಿಯಮಗಳನ್ನು ರಚಿಸಬೇಕಾಗಿರುತ್ತದೆ ಹಾಗೂ ಆರ್ಥಿಕ ಇಲಾಖೆಯಲ್ಲಿ ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು

ಬುಡಕಟ್ಟು ಉಪ ಯೋಜನೆಗೆ ಸಂಬಂಧಿಸಿದಂತೆ ಪ್ರತ್ಯೇಕ ಕೋಶ ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿದೆ.

ಇ) ಹೌದು. ಕಳೆದ ಮೂರು ವರ್ಷಗಳ ಫಲಿತಾಂಶದ ವಿವರಗಳು ಈ ಕೆಳಕಂಡಂತಿವೆ.

1. 2011-12ನೇ ಸಾಲಿನಲ್ಲಿ ಶೇ. 94.18
2. 2012-13ನೇ ಸಾಲಿನಲ್ಲಿ ಶೇ. 95.41
3. 2013-14ನೇ ಸಾಲಿನಲ್ಲಿ ಶೇ. 95.97

ಈ) ಹೆಚ್ಚಿನ ಫಲಿತಾಂಶ ಪಡೆಯಲು ಕ್ರಮವಹಿಸಲಾಗುತ್ತಿದ್ದು, ಖಾಯಂ ಪ್ರಾಂಶುಪಾಲರನ್ನು ಮತ್ತು ಶಿಕ್ಷಕರನ್ನು ನೇಮಕ ಮಾಡಲಾಗಿದೆ. ಖಾಲಿ ಇರುವ ಹುದ್ದೆಗಳಿಗೆ ಹೊರಗುತ್ತಿಗೆ ಮತ್ತು ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು, ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಯಾವುದೇ ಕೊರತೆ ಆಗದಂತೆ ಕ್ರಮವಹಿಸಲಾಗಿದೆ. ಪ್ರಾಂಶುಪಾಲರು ಮತ್ತು ಶಿಕ್ಷಕರುಗಳು ಪಾಠ ಪ್ರವಚನ ಮತ್ತು ಹೆಚ್ಚಿನ ಫಲಿತಾಂಶ ಪಡೆಯಲು ತರಬೇತಿಯನ್ನು ಸಂಪನ್ಮೂಲ ವ್ಯಕ್ತಿಗಳಿಂದ ನೀಡಲಾಗುತ್ತಿದೆ.

ಔಷಧ ಅಂಗಡಿಗಳು

2782 (4013), ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ರಾಜ್ಯದಲ್ಲಿ ಮಾನ್ಯತೆ ಪಡೆದ ಔಷಧಿ ಅಂಗಡಿಗಳು ಎಷ್ಟು; ಅವು ಎಲ್ಲೆಲ್ಲಿ ಇವೆ;

ಆ) ಈ ಅಂಗಡಿಗಳಲ್ಲಿ ಔಷಧಿಗಳ ಹೆಸರಿನಲ್ಲಿ ಮಾದಕ ಡ್ರಗ್ಸ್ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಇಲ್ಲಿಯವರೆವಿಗೆ ಇಂತಹ ಪ್ರಕರಣಗಳು ಎಷ್ಟು ಪತ್ತೆಯಾಗಿವೆ; ಅಂಥವರ ಮೇಲೆ ಏನು ಕ್ರಮ ತಗೆದುಕೊಳ್ಳಲಾಗಿದೆ;

ಈ) ಅನೇಕ ಔಷಧ ಅಂಗಡಿಗಳು ಬೇನಾಮಿಯಾಗಿ ನಡೆಸುತ್ತಿದ್ದು ಇಂತಹ ಅಕ್ರಮಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳಾವುವು?